## <u>ಮಂಗಳೂರು ವಿಶ್ವವಿದ್ಯಾನಿಲಯ</u>

**ದಿನಾಂಕ 07.07.2017 ರಂದು ಪೂರ್ವಾಹ್ನ ಗಂಟೆ 11:00ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟ್ ಸಭಾಂಗಣದಲ್ಲಿ ನಡೆದ ಸಿಂಡಿಕೇಟಿನ 2017ನೇ ಸಾಲಿನ ನಾಲ್ಕನೆಯ ಸಾಮಾನ್ಯ ಸಭೆಯ ನಡಾವಳಿಗಳು.**

**ಉಪಸ್ಥಿತ ಸದಸ್ಯರು**

**ಅನುಪಸ್ಥಿತ ಸದಸ್ಯರು:**

ಪ್ರಾರಂಭದಲ್ಲಿ ಮಾನ್ಯ ಕುಲಪತಿಯವರು ಎಲ್ಲಾ ಸದಸ್ಯರನ್ನು ಸಭೆಗೆ ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಿದರು.

### <u>ಪ್ರಾರಂಭಿಕ</u>

1. ಮಾನ್ಯ ಕುಲಪತಿಯವರು, ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರ ಜೇಷ್ಠತೆ ಹಾಗೂ ಸರದಿಯ ಮೇರೆಗೆ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್‌ಗೆ ಸದಸ್ಯರಾಗಿ ಮಾನ್ಯ ಕುಲಪತಿಯವರಿಂದ ನಾಮನಿರ್ದೇಶನಗೊಂಡ ಪ್ರೊ.ಸತ್ಯನಾರಾಯಣ ಭಟ್, ಪ್ರಾಂಶುಪಾಲರು, ಸರಕಾರಿ ಪ್ರಥಮ ದರ್ಜೆ ಕಾಲೇಜು, ಸಿದ್ಧಕಟ್ಟೆ, ಬಂಟ್ವಾಳ ಇವರನ್ನು ಸಭೆಗೆ ಪರಿಚಯಿಸಿ ಸ್ವಾಗತಿಸಿದರು.

### ಪ್ರಸ್ತಾವನೆ

1. ಅಧ್ಯಕ್ಷರು, ಆರಂಭದಲ್ಲಿ ಸಭೆಯ ಎಲ್ಲಾ ಸದಸ್ಯರಿಗೆ ಮಂಗಳೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿ ಬರುವ ವಿವಿಧ ಸಂಯೋಜಿತ ಮತ್ತು ಸ್ನಾತಕೋತರ ಕೇಂದ್ರಗಳಲ್ಲಿ ನಡೆಯುತ್ತಿರುವ ಅಭಿವೃದ್ಧಿ ಕಾರ್ಯಗಳ ಕುರಿತು ಮಾಹಿತಿ ನೀಡಿದರು. ಉಡುಪಿ ಜಿಲ್ಲೆಯ ಬೆಳಪು ಗ್ರಾಮದಲ್ಲಿ ವಿಶ್ವವಿದ್ಯಾನಿಲಯವು ಪ್ರಾರಂಭಿಸಲು ಉದ್ದೇಶಿಸಿರುವ ಅತ್ಯಾಧುನಿಕ ವಿಜ್ಞಾನ ಸಂಶೋಧನಾ ಕೇಂದ್ರಕ್ಕೆ ಕರ್ನಾಟಕ ಸರ್ಕಾರವು ಅನುದಾನವಾಗಿ ರೂ. ಐವತ್ತು ಕೋಟಿಯನ್ನು ಬಿಡುಗಡೆ ಮಾಡಿರುವ ಕುರಿತು ಮಾಹಿತಿಯನ್ನು ನೀಡುತ್ತಾ ಆ ಕೇಂದ್ರವು ಮುಂಬರುವ ದಿನಗಳಲ್ಲಿ ವಿಕಾಸಗೊಳ್ಳುವ ರೀತಿಯ ಕುರಿತು ರೂಪು ರೇಷೆಗಳನ್ನು ವಿವರಿಸಿದರು.

   ಮುಂದುವರೆದು ಅವರು ಪುತ್ತೂರು ತಾಲೂಕಿಗೆ ಸೇರಿದ ನೆಲ್ಯಾಡಿಯಲ್ಲಿ ಸರ್ಕಾರದ ನೆರವಿನಿಂದ ಸುಮಾರು ಇಪ್ಪತ್ತಾರು ಎಕರೆ ಜಮೀನು ದೊರೆತಿದ್ದು ಅಲ್ಲಿ ವಿಶ್ವವಿದ್ಯಾನಿಲಯದ ಘಟಕ ಕಾಲೇಜನ್ನು ಸ್ಥಾಪಿಸುವ ಕಾರ್ಯಯೋಜನೆಯ ಕುರಿತು ಮಾಹಿತಿಯನ್ನು ಸದಸ್ಯರೊಂದಿಗೆ ಹಂಚಿಕೊಂಡರು. ಅದೇ ರೀತಿ ಕುಶಾಲನಗರ ಬಳಿಯ ಚಿಕ್ಕ ಅಳುವಾರ ಗ್ರಾಮದಲ್ಲಿರುವ ಸ್ನಾತಕೋತ್ತರ ಕೇಂದ್ರವು ಪರಿಣಾಮಕಾರಿಯಾಗಿ ಕೆಲಸ ಮಾಡುತ್ತಿದ್ದು, ಈವರೆಗೆ ಎಪ್ಪತ್ತು ಎಕರೆ ಜಮೀನು ದೊರೆತಿದ್ದು ಇನ್ನೂ ಮೂವತ್ತು ಎಕರೆ ಜಮೀನನ್ನು ಪಡೆಯಲು ಕ್ರಮ ಕೈಗೊಳ್ಳಲಾಗುತ್ತದೆ ಎಂದು ತಿಳಿಸಿದರು. ಈ ಕೇಂದ್ರಕ್ಕೆ ಸ್ಥಳೀಯರಿಂದ ಯಾವುದೇ ಹಣಕಾಸಿನ ಸಹಾಯ ದೊರೆಯದಿರುವುದರಿಂದ ಪ್ರಗತಿ ಕಾರ್ಯ ಸ್ವಲ್ಪ ನಿಧಾನವಾಗಿದೆ. ಸರಕಾರದಿಂದ ಹಣಕಾಸಿನ ನೆರವು ಕೋರಿ ಶೀಘ್ರದಲ್ಲಿ ಕೊಡಗು ಜಿಲ್ಲೆಯ ಜನ ಪ್ರತಿನಿಧಿಗಳ ನಿಯೋಗವೊಂದನ್ನು ರಾಜ್ಯದ ಮಾನ್ಯ ಮುಖ್ಯಮಂತ್ರಿಗಳಲ್ಲಿಗೆ ಕರೆದುಕೊಂಡು ಹೋಗುವ ಯೋಜನೆಯಿದೆ ಎಂದು ತಿಳಿಸಿದರು.

   ಮಂಗಳೂರು ವಿಶ್ವವಿದ್ಯಾನಿಲಯಕ್ಕೆ ಸಂಬಂಧಿಸಿದಂತೆ ಭೂಸರ್ವೇಕ್ಷಣಾ ಕಾರ್ಯವು ಶೀಘ್ರಗತಿಯಲ್ಲಿ ಸಾಗಿದ್ದು ಹೆಚ್ಚು ಕಡಿಮೆ ಆ ಕಾರ್ಯವು ಮುಗಿದಿದೆ ಹಾಗೂ ಸರ್ವೇಕ್ಷಣಾ ವರದಿಯು ಸಧ್ಯದಲ್ಲಿಯೇ ಸಲ್ಲಿಸಲ್ಪಡುವುದೆಂದು ತಿಳಿಸಿದರು.

2. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ವಿವಿಧ ಶೈಕ್ಷಣಿಕ ಹಾಗೂ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಸಂಬಂಧಿಸಿದಂತೆ ನಡೆಯುತ್ತಿರುವ ಕಾರ್ಯಗಳಿಗೆ ಸಂಪನ್ಮೂಲಗಳನ್ನು ಕ್ರೋಡಿಕರಿಸುವ ಉದ್ದೇಶದಿಂದ ಸ್ಥಳೀಯ ಜನಪ್ರತಿನಿಧಿಗಳ (ಮಂಗಳೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಸೇರಿದ ಜಿಲ್ಲೆಗಳ ಎಂ.ಎಲ್.ಎ, ಎಂ.ಎಲ್.ಸಿ ಹಾಗೂ ಸಂಸದರು) ಸಭೆಯೊಂದನ್ನು ವಿಶ್ವವಿದ್ಯಾನಿಲಯದಲ್ಲಿ ಕರೆಯಬೇಕೆಂದು ಸದಸ್ಯರು ಅಭಿಪ್ರಾಯಪಟ್ಟಾಗ ಅಧ್ಯಕ್ಷರು ಅದನ್ನು ಆಗಸ್ಟ್ ತಿಂಗಳಲ್ಲಿ ಮಾಡಲಾಗುವುದೆಂದು ತಿಳಿಸಿದರು.

3. ವಿರಾಜಪೇಟೆಯ ಬಳಿ ಇರುವ ಸಂಶುಲ್‌ಉಲೆಮಾ ಕಾಲೇಜು ಮೈಸೂರು ವಿಶ್ವವಿದ್ಯಾನಿಲಯದ ಹೆಸರಿನಲ್ಲಿ ಪದವಿ ಪತ್ರಗಳನ್ನು ನೀಡುತ್ತಿದೆ ಎಂಬ ಆರೋಪಗಳು ಕೇಳಿಬಂದಿರುವ ಹಿನ್ನಲೆಯಲ್ಲಿ ಆ ಕಾಲೇಜಿಗೆ ಪರೀಕ್ಷಾಂಗ ಕುಲಸಚಿವರು, ಸಿಂಡಿಕೇಟ್ ಸದಸ್ಯರು ಹಾಗೂ ಕಾಲೇಜು ಶಿಕ್ಷಣ ಇಲಾಖೆಯ ಜಂಟಿ ನಿರ್ದೇಶಕರನ್ನು ಒಳಗೊಂಡ ತಂಡವು ಶೀಘ್ರದಲ್ಲಿ ಭೇಟಿ ನೀಡಿ ವರದಿ ಸಲ್ಲಿಸಬೇಕೆಂದು ನಿರ್ಣಯಿಸಲಾಯಿತು.

4. ಎಂ.ಎಸ್.ಡಬ್ಲ್ಯೂ ಕೋರ್ಸಿನ ಸಿಲೆಬಸ್, ವಿದ್ಯಾರ್ಥಿಗಳಿಗೆ ಸ್ಪೇಷಲೈಜೆಷನ್ (specialisation) ಹಂಚಿಕೆ ಹಾಗೂ ಮೌಖಿಕ ಪರೀಕ್ಷೆಗೆ ಸಂಬಂಧಿಸಿದಂತೆ ಡಾ. ಸುಮಾ ರೈಯವರು ಎತ್ತಿದ ಪ್ರಶ್ನೆಗಳಿಗೆ ಸಂಬಂಧಿಸಿದಂತೆ ಸಮಾಜಕಾರ್ಯ ಬೋಧಕರ ಕಾರ್ಯಗಾರವೊಂದನ್ನು ನಡೆಸಿ ಅದರಲ್ಲಿ ಮೂಡಿಬರುವ ಅಭಿಪ್ರಾಯದಂತೆ ಅಸ್ತಿತ್ವದಲ್ಲಿರುವ ಪರಿನಿಯಮಕ್ಕೆ ತಿದ್ದುಪಡಿಯನ್ನು ತರಲು ನಿರ್ಧರಿಸಲಾಯಿತು.

5. ತೀರಾ ಇತ್ತೀಚೆಗೆ ಕೆಲವು ಟಿ.ವಿ ಸುದ್ದಿ ವಾಹಿನಿಯಲ್ಲಿ ವಿಶ್ವವಿದ್ಯಾನಿಲಯದ ರ್‍ಯಾಂಕಿಂಗ್ ಬಗ್ಗೆ ಮಾಜಿ ಕುಲಸಚಿವರು ನೀಡಿದ ಹೇಳಿಕೆಯನ್ನು ಸಭೆಯು ಚರ್ಚೆಗೆ ತೆಗೆದುಕೊಂಡಾಗ, ವಿಶ್ವವಿದ್ಯಾನಿಲಯದ ಯಾವುದೇ ಸಿಬ್ಬಂದಿಯು (ಬೋಧಕ, ಬೋಧಕೇತರ) ವಿಶ್ವವಿದ್ಯಾನಿಲಯದ ವಿರುದ್ಧ ಅಥವಾ ಅದರ ಅಧಿಕಾರಿಗಳ ವಿರುದ್ಧ ಸಾರ್ವಜನಿಕ ವೇದಿಕೆಗಳಲ್ಲಿ ಹೇಳಿಕೆ ನೀಡುವುದು ವಿಶ್ವವಿದ್ಯಾನಿಲಯದ ಕಾನೂನಿಗೆ ವಿರುದ್ಧವಾಗಿದ್ದು, ಈ ಬಗ್ಗೆ ಈಗಾಗಲೇ ಸುತ್ತೋಲೆಗಳ ಮೂಲಕ ಸಿಬ್ಬಂದಿಗಳಿಗೆ ತಿಳಿಸಲಾಗಿರುತ್ತದೆ ಎಂದು ಅವರು ತಿಳಿಸಿದರು. ವಿಶ್ವವಿದ್ಯಾನಿಲಯದ ವಿರುದ್ಧ ಈಗ ಹೇಳಿಕೆ ನೀಡಿದ ಸದ್ರಿ ಸಿಬ್ಬಂದಿಯಿಂದ ವಿವರಣೆ ಕೇಳಬೇಕೆಂದು ಕುಲಸಚಿವರಿಗೆ ಸೂಚಿಸಿದರು. ಅಲ್ಲದೇ ಇಂತಹ ಕಾನೂನು ಬಾಹಿರ ಕೆಲಸದಲ್ಲಿ ಸಿಬ್ಬಂದಿಗಳು ತೊಡಗಿದರೆ ಕಾನೂನು ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸುತ್ತಾ ಇನ್ನೊಂದು ಸುತ್ತೋಲೆಯೊಂದನ್ನು ನೀಡಲು ಕುಲಸಚಿವರಿಗೆ ಸೂಚಿಸಲಾಯಿತು.

6. ವಿಶ್ವವಿದ್ಯಾನಿಲಯದಲ್ಲಿ ಹೊರಗುತ್ತಿಗೆಯಲ್ಲಿ ಸೇವೆ ಸಲ್ಲಿಸುತ್ತಿರುವ ವಿವಿಧ ನೌಕರರಿಗೆ ದೊರೆಯ ಬೇಕಾದ ESI ಸೌಲಭ್ಯ PF ಪಾವತಿ ಕುರಿತು ಕೆಲವು ಸದಸ್ಯರು ಮಾಹಿತಿ ಬಯಸಿದಾಗ ಅಧ್ಯಕ್ಷರು ಹೊರಗುತ್ತಿಗೆ ಕರಾರುದಾರರು ಈ ಕುರಿತು ತೆಗೆದುಕೊಂಡಿರುವ ಕ್ರಮಗಳನ್ನು ಸದಸ್ಯರ ಗಮನಕ್ಕೆ ತಂದರು. ಅಲ್ಲದೆ ಸಿಬ್ಬಂದಿಗಳಿಗೆ ದೊರಕಬೇಕಾದ ಸೌಲಭ್ಯಗಳನ್ನು ಒದಗಿಸುವ ಕುರಿತು ಗುತ್ತಿಗೆದಾರರಿಗೆ ಸ್ಪಷ್ಟ ನಿರ್ದೇಶನಗಳನ್ನು ನೀಡಲಾಗಿದೆಯೆಂದು ತಿಳಿಸಿದರು.

7. ಪರೀಕ್ಷಾಂಗ ವಿಭಾಗಕ್ಕೆ ಸಂಬಂಧಿಸಿದಂತೆ ಸದಸ್ಯರೊಬ್ಬರ ಪ್ರಶ್ನೆಗೆ ಉತ್ತರಿಸಿದ ಅಧ್ಯಕ್ಷರು ಕೆಲವು ಸ್ನಾತಕೋತರ ವಿಷಯಗಳಲ್ಲಿ ಮೌಲ್ಯಮಾಪನಕ್ಕೆ ಸಂಬಂಧಿಸಿದ ಪ್ರಕ್ರಿಯೆಯು ಕೊನೆಗೊಂಡ ಕೂಡಲೇ ಅಗತ್ಯ ಹಾಗೂ ಸಂಪೂರ್ಣ ಮಾಹಿತಿ ಹಾಗೂ ಅಂಕಿಅಂಶಗಳನ್ನು ಮುಂದಿನ ಕ್ರಮಕ್ಕಾಗಿ ಸಭೆಯ ಮುಂದೆ ಮಂಡಿಸಲಾಗುವುದೆಂದು ತಿಳಿಸಿದರು.

8. ಕೆಲವು ಸರ್ಕಾರಿ/ಖಾಸಗಿ ಕಾಲೇಜುಗಳು ಹೊಸ ಕೋರ್ಸುಗಳನ್ನು ಪ್ರಾರಂಭಿಸುವ ನಿಟ್ಟಿನಲ್ಲಿ ಸರ್ಕಾರಕ್ಕೆ ಮನವಿ ಸಲ್ಲಿಸಿ ಅನುಮತಿಯನ್ನು ಪಡೆದುಕೊಂಡು ಅವುಗಳನ್ನು ವಿಶ್ವವಿದ್ಯಾನಿಲಯದ ಗಮನಕ್ಕೆ ತಂದು, ಮೂಲಭೂತ ಅಥವಾ ಅಗತ್ಯ ಸೌಕರ್ಯಗಳು ಇಲ್ಲದಿದ್ದರೂ ಆ ಕೋರ್ಸ್‌ಗಳನ್ನು ಪ್ರಾರಂಭಿಸಲು ವಿಶ್ವವಿದ್ಯಾನಿಲಯದ ಅನುಮೋದನೆಯನ್ನು ಪಡೆಯಲು ಪ್ರಯತ್ನಿಸುತ್ತಿರುವುದು ಮತ್ತು ಒತ್ತಡ ತರುವ ಕುರಿತು ಸಭೆಯು ಚರ್ಚಿಸಿತು. ವಿಶ್ವವಿದ್ಯಾನಿಲಯವು ತನ್ನ ಎಲ್‌ಐಸಿ (ಸ್ಥಳೀಯ ಪರಿಶೀಲನಾ ಸಮಿತಿ)ಯನ್ನು ಕಳುಹಿಸಿ ಕಾಲೇಜಿನಲ್ಲಿ ಅಸ್ತಿತ್ವದಲ್ಲಿರುವ ಸೌಲಭ್ಯಗಳ ಕುರಿತು (ಜಮೀನು, ಕಟ್ಟಡಗಳು, ಗ್ರಂಥಾಲಯ, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ, ಲ್ಯಾಬ್ ಸೌಕರ್ಯ, ಇತ್ಯಾದಿ) ಮಾಹಿತಿ ಪಡೆದು ಕೋರ್ಸ್‌ಗಳನ್ನು ಪ್ರಾರಂಭಿಸುವುದಕ್ಕೆ ಅನುಮತಿ ನೀಡುವ ಪ್ರಕ್ರಿಯೆಯನ್ನು ಅನುಸರಿಸುತ್ತದೆ. ಆದರೆ ಈ ಪ್ರಕ್ರಿಯೆಯನ್ನು ಪಾಲಿಸದೇ ಕಾಲೇಜುಗಳು ಹೊಸ ಕೋರ್ಸುಗಳ ಪ್ರಾರಂಭಾತಿಗಾಗಿ ಒತ್ತಡ ತರುತ್ತಿರುವ ಕುರಿತು ತೀವ್ರ ಕಳವಳ ವ್ಯಕ್ತಪಡಿಸಿದ ಸದಸ್ಯರು ಇದನ್ನು ಗುಣಮಟ್ಟದ ಶಿಕ್ಷಣ ನೀಡಲು ಪೂರಕವಾಗಿಲ್ಲ ಎಂದು ಅಭಿಪ್ರಾಯಪಟ್ಟರು ಮತ್ತು ಈ ಕುರಿತು ಸರ್ಕಾರಕ್ಕೆ ಪತ್ರವನ್ನು ಬರೆದು ಹೊಸ ಕೋರ್ಸುಗಳಿಗೆ ಅನುಮತಿ ನೀಡುವ ಮೊದಲು ಸಂಬಂಧಪಟ್ಟ ವಿಶ್ವವಿದ್ಯಾನಿಲಯಗಳ ಅಭಿಪ್ರಾಯಗಳನ್ನು ಪಡೆದುಕೊಳ್ಳಲೇಬೇಕೆಂದು ಕೋರಿಕೊಳ್ಳಲು ನಿರ್ಧರಿಸಲಾಯಿತು.

9. ಡಾ. ಮಾಧವ, ಸಹಾಯಕ ಪ್ರಾಧ್ಯಾಪಕರು, ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಕಾಲೇಜು, ಮಡಿಕೇರಿ, ಇವರ ಪರಿವೀಕ್ಷಣಾವಧಿ ಘೋಷಿಸುವ ಬಗ್ಗೆ, ಹಿಂದಿನ ಸಿಂಡಿಕೇಟು ಸಭೆಯು, ಅವರ ನೇಮಕಾತಿಯ ವಿರುದ್ಧ ಖಟ್ಲೆ ಇದ್ದ ಕಾರಣ ಪರಿವೀಕ್ಷಣಾವಧಿಯನ್ನು ಘೋಷಿಸಲು ಸಾಧ್ಯವಿಲ್ಲ ಎಂದು ನಿರ್ಣಯಿಸಿತ್ತು. ಆದರೆ ಕೆಲವು ಸದಸ್ಯರು ಖಟ್ಲೆಯಿದ್ದ ಪ್ರಕರಣಗಳಲ್ಲಿಯೂ ಕೂಡ ಕೆಲವು ಅಭ್ಯರ್ಥಿಗಳ ಪರಿವೀಕ್ಷಣಾವಧಿಯನ್ನು ಘೋಷಿಸಲಾಗಿದ್ದ ದೃಷ್ಟಾಂತವನ್ನು ಉಲ್ಲೇಖಿಸಿದಾಗ ಡಾ.ಮಾಧವ ಅವರ ಕೋರಿಕೆಯಂತೆ ಅವರ ಪರಿವೀಕ್ಷಣಾವಧಿಯನ್ನು ಷರತ್ತುಗಳನ್ನು ವಿಧಿಸಿ ಘೋಷಿಸುವುದು ಹಾಗೂ ಇತರರ ಪರಿವೀಕ್ಷಣಾವಧಿಯನ್ನು ಘೋಷಿಸಿರುವ ಪತ್ರವನ್ನು ಹಿಂತೆಗೆದು ಅವರಿಗೂ ಸಹಾ ಷರತ್ತುಗಳನ್ನು ವಿಧಿಸಿ ಘೋಷಿಸಬೇಕೆಂದು ನಿರ್ಧರಿಸಲಾಯಿತು.

10. Aviation ಎಂಬ ವಿಷಯಕ್ಕೆ ಸಂಬಂಧಿಸಿದಂತೆ ಕೆಲವು ಸಂಸ್ಥೆಗಳು ಹೆಚ್ಚಿನ ವಿದ್ಯಾರ್ಥಿ ಪ್ರವೇಶಾತಿಗೋಸ್ಕರ ಬೇಡಿಕೆ ಸಲ್ಲಿಸುತ್ತಿರುವುದನ್ನು ಸಭೆಯು ಗಮನಿಸಿ, ಕೋರ್ಸಿನ ಗುಣಮಟ್ಟವನ್ನು ಕಾಯ್ದುಕೊಳ್ಳಲು ಪ್ರವೇಶಾತಿಗೆ ಕಡಿವಾಣ ಹಾಕಲು ಕ್ರಮಕೈಗೊಳ್ಳಲು ನಿರ್ಣಯಿಸಿತು.

## I ನಡಾವಳಿಗಳ ದೃಢೀಕರಣ

ದಿನಾಂಕ 03.05.2017 ಮತ್ತು 12.05.2017ರಂದು ನಡೆದ 2017ನೇ ಸಾಲಿನ ತೃತೀಯ ಸಾಮಾನ್ಯ ಸಭೆಯ ನಡಾವಳಿಗಳನ್ನು ಈ ಕೆಳಗಿನಂತೆ ತಿದ್ದುಪಡಿ ಮಾಡಿ ದೃಢೀಕರಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ ಸಾ.ಸ.3:21(2017)

**ವಿಷಯ :** Construction of Clock Tower with water fountain in between Science Block and Library Building located at Mangalore University Campus.

– ಅಂದಾಜು ಮೊತ್ತ ರೂ. 65,00,000.00

**ನಿರ್ಣಯ:** ದಿನಾಂಕ 02.05.2017ರ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು. ಆ ಜಾಗದಲ್ಲಿ ನಾಲ್ಕೂ ಕಡೆಯಿಂದ ವಾಹನಗಳು ಬರುವ ಕಾರಣ ಹಾಗೂ ಒಂದು ವಾಹನಕ್ಕೆ ಇನ್ನೊಂದು ವಾಹನ ಕಾಣದೆ ವಾಹನಗಳು ಡಿಕ್ಕಿ ಹೊಡೆಯುವ ಸಂದರ್ಭ ಇರುವುದರಿಂದ ನಾಲ್ಕೂ ಕಡೆ ಕನ್ನಡಿಯನ್ನು ಅಳವಡಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ ಸಾ.ಸ.3:24(2017)

**ವಿಷಯ :** ಪ್ರೊ. ವಿಶಾಲಾಕ್ಷಿ ಬಿ., ಪ್ರಾಧ್ಯಾಪಕರು, ರಸಾಯನಶಾಸ್ತ್ರ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ, ಇವರಿಗೆ ದಿನಾಂಕ 07.06.2017 ರಿಂದ 09.06.2017ರ ವರೆಗೆ Bali, Indonesia ಇಲ್ಲಿ ನಡೆಯಲಿರುವ ಅಂತರಾಷ್ಟ್ರೀಯ ಸಮ್ಮೇಳನದಲ್ಲಿ ಭಾಗವಹಿಸಿ ಪತ್ರಿಕೆ ಮಂಡಿಸಲು ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಸದರಿಯವರಿಗೆ ಸಮ್ಮೇಳನದಲ್ಲಿ ಭಾಗವಹಿಸಲು ಅನುಮತಿ ಹಾಗೂ ರಜಾ ಸೌಲಭ್ಯ ನೀಡಲು ನಿರ್ಣಯಿಸಲಾಯಿತು. ಪ್ರಸ್ತುತ ವಿಶ್ವವಿದ್ಯಾನಿಲಯಕ್ಕೆ ಯುಜಿಸಿ ನಿಗದಿಪಡಿಸದ ಅನುದಾನಗಳ ಶೀರ್ಷಿಕೆಯಡಿ ಅನುದಾನದ ಕೊರತೆಯಿರುವುದರಿಂದ ಆರ್ಥಿಕ ಸೌಲಭ್ಯ ಮಂಜೂರು ಮಾಡಲು ಸಾಧ್ಯವಿಲ್ಲವೆಂದು ತಿಳಿಸಲು ನಿರ್ಧರಿಸಲಾಯಿತು.

ಅಂತರಾಷ್ಟ್ರೀಯ ಸಮ್ಮೇಳನದ ನಿಯಮದಂತೆ ಸಮ್ಮೇಳನದಲ್ಲಿ ಭಾಗವಹಿಸಲಿಚ್ಛಿಸುವವರು ಮುಂಗಡವಾಗಿಯೇ ನೊಂದಣಿ ಶುಲ್ಕ ಮತ್ತು ವಿಮಾನ ಪ್ರಯಾಣ ಟಿಕೇಟಿನ ಮೊತ್ತವನ್ನು ಕೊಡಬೇಕಾಗುತ್ತದೆ; ಆದ್ದರಿಂದ ಪ್ರೊ.ವಿಶಾಲಾಕ್ಷಿ ಬಿ, ಈಗಾಗಲೇ ಆ ಮೊತ್ತವನ್ನು ಕೊಟ್ಟಿರುವುದರಿಂದ ಮತ್ತು ವಿಶ್ವವಿದ್ಯಾನಿಲಯವು ಖರ್ಚನ್ನು ಭರಿಸಲು ಸಾಧ್ಯವಿಲ್ಲವೆಂದು ತಿಳಿಸದಿದ್ದುದರಿಂದ ಸದರಿಯವರಿಗೆ ರೂ.60,000/-ವನ್ನು ಯುಜಿಸಿಯಿಂದ ಅನುದಾನ ಬಂದಾಗ ಮರುಭರಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ ಸಾ.ಸ.3:26(2017)

**ವಿಷಯ :** DAE – BRNS ಪ್ರಾಜೆಕ್ಟ್, ರಸಾಯನಶಾಸ್ತ್ರ ವಿಭಾಗ – ಉಪಕರಣ ಖರೀದಿ ಪ್ರಸ್ತಾವನೆ ಬಗ್ಗೆ.

**ನಿರ್ಣಯ:** ದಿನಾಂಕ: 02.05.2017 ರ ಖರೀದಿ ಸಮಿತಿ ಸಭೆಯ ಶಿಫಾರಸ್ಸಿನಂತೆ M/S Genext Scientific & IT Solutions, Mulky -574 154 ಇಲ್ಲಿಂದ Ice Flaking Machine with Crusher ಉಪಕರಣವನ್ನು ರೂ.1,62,000.00 ಮತ್ತು Rotary Evaporator ಉಪಕರಣವನ್ನು ರೂ.2,69,000.00 ವೆಚ್ಚದಲ್ಲಿ ಖರೀದಿಸುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

II ಅನುಸರಣಾ ವರದಿಯ ಅನುಮೋದನೆ

1. ದಿನಾಂಕ 22.03.2017ರಂದು ನಡೆದ 2017ನೇ ಸಾಲಿನ ಪ್ರಥಮ ಸಾಮಾನ್ಯ ಸಭೆಯ ಅನುಸರಣಾ ವರದಿಯನ್ನು ಅನುಮೋದಿಸಲಾಯಿತು.

III ಈ ಸಿಂಡಿಕೇಟು ಸಭೆಗೆ ಮಂಡಿಸಿರುವ ಕಾರ್ಯಸೂಚಿಗಳು

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಸಾ.ಸ.4:1(2017)

**ವಿಷಯ:** ವಿವೇಕಾನಂದ ಕಾಲೇಜ್ ಆಫ್ ಎಜುಕೇಷನ್, ಪುತ್ತೂರು ಎಂಬ ವಿದ್ಯಾ ಸಂಸ್ಥೆಗೆ ಶೈಕ್ಷಣಿಕ ವರ್ಷ 2017–18ನೇ ಸಾಲಿಗೆ ಮುಂದುವರಿಕೆ ಸಂಯೋಜನಾ ಮಂಜೂರಾತಿ ಬಗ್ಗೆ.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯು ಮುಂದುವರಿಕೆ ಸಂಯೋಜನೆ ಬಗ್ಗೆ ಸಲ್ಲಿಸಿದ ವರದಿಯ ಆಧಾರದ ಮೇಲೆ ಶೈಕ್ಷಣಿಕ ಮಂಡಳಿಯು ಮಾಡಿರುವ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಸಾ.ಸ.4:2(2017)

**ವಿಷಯ:** ಮಾರ್ ಇವೇನಿಯಸ್ ಕಾಲೇಜ್ ಆಫ್ ಎಜುಕೇಷನ್, ಕುಂತೂರು, ಪುತ್ತೂರು ಎಂಬ ವಿದ್ಯಾ ಸಂಸ್ಥೆಗೆ ಶೈಕ್ಷಣಿಕ ವರ್ಷ 2017–18ನೇ ಸಾಲಿಗೆ ಮುಂದುವರಿಕೆ ಸಂಯೋಜನಾ ಮಂಜೂರಾತಿ ಬಗ್ಗೆ.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯು ಮುಂದುವರಿಕೆ ಸಂಯೋಜನೆ ಬಗ್ಗೆ ಸಲ್ಲಿಸಿದ ವರದಿಯ ಆಧಾರದ ಮೇಲೆ ಶೈಕ್ಷಣಿಕ ಮಂಡಳಿಯು ಮಾಡಿರುವ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಸಾ.ಸ.4:3(2017)

**ವಿಷಯ:** ಕರಾವಳಿ ಕಾಲೇಜ್ ಆಫ್ ಎಜುಕೇಷನ್, ಮಂಗಳೂರು ಎಂಬ ವಿದ್ಯಾ ಸಂಸ್ಥೆಗೆ ಶೈಕ್ಷಣಿಕ ವರ್ಷ 2017–18ನೇ ಸಾಲಿಗೆ ಮುಂದುವರಿಕೆ ಸಂಯೋಜನಾ ಮಂಜೂರಾತಿ ಬಗ್ಗೆ.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯು ಮುಂದುವರಿಕೆ ಸಂಯೋಜನೆ ಬಗ್ಗೆ ಸಲ್ಲಿಸಿದ ವರದಿಯ ಆಧಾರದ ಮೇಲೆ ಶೈಕ್ಷಣಿಕ ಮಂಡಳಿಯು ಮಾಡಿರುವ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಸಾ.ಸ.4:4(2017)

**ವಿಷಯ:** ಪ್ರಸನ್ನ ಕಾಲೇಜ್ ಆಫ್ ಎಜುಕೇಷನ್, ಬೆಳ್ತಂಗಡಿ ಎಂಬ ವಿದ್ಯಾ ಸಂಸ್ಥೆಗೆ ಶೈಕ್ಷಣಿಕ ವರ್ಷ 2017–18ನೇ ಸಾಲಿಗೆ ಮುಂದುವರಿಕೆ ಸಂಯೋಜನಾ ಮಂಜೂರಾತಿ ಬಗ್ಗೆ.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯು ಮುಂದುವರಿಕೆ ಸಂಯೋಜನೆ ಬಗ್ಗೆ ಸಲ್ಲಿಸಿದ ವರದಿಯ ಆಧಾರದ ಮೇಲೆ ಶೈಕ್ಷಣಿಕ ಮಂಡಳಿಯು ಮಾಡಿರುವ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಸಾ.ಸ.4:5(2017)

**ವಿಷಯ:** ಬ್ಯಾರೀಸ್ ಕಾಲೇಜ್ ಆಫ್ ಎಜುಕೇಷನ್, ಕುಂದಾಪುರ ಎಂಬ ವಿದ್ಯಾಸಂಸ್ಥೆಗೆ ಶೈಕ್ಷಣಿಕ ವರ್ಷ 2017–18ನೇ ಸಾಲಿಗೆ ಮುಂದುವರಿಕೆ ಸಂಯೋಜನಾ ಮಂಜೂರಾತಿ ಬಗ್ಗೆ.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯು ಮುಂದುವರಿಕೆ ಸಂಯೋಜನೆ ಬಗ್ಗೆ ಸಲ್ಲಿಸಿದ ವರದಿಯ ಆಧಾರದ ಮೇಲೆ ಶೈಕ್ಷಣಿಕ ಮಂಡಳಿಯು ಮಾಡಿರುವ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಸಾ.ಸ.4:6(2017)

**ವಿಷಯ:** ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಕಾಲೇಜ್ ಆಫ್ ಎಜುಕೇಷನ್, ಉಜಿರೆ ಎಂಬ ವಿದ್ಯಾ ಸಂಸ್ಥೆಗೆ ಶೈಕ್ಷಣಿಕ ವರ್ಷ 2017–18ನೇ ಸಾಲಿಗೆ ಮುಂದುವರಿಕೆ ಸಂಯೋಜನಾ ಮಂಜೂರಾತಿ ಬಗ್ಗೆ.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯು ಮುಂದುವರಿಕೆ ಸಂಯೋಜನೆ ಬಗ್ಗೆ ಸಲ್ಲಿಸಿದ ವರದಿಯ ಆಧಾರದ ಮೇಲೆ ಶೈಕ್ಷಣಿಕ ಮಂಡಳಿಯು ಮಾಡಿರುವ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಸಾ.ಸ.4:7(2017)

**ವಿಷಯ:** ಆಳ್ವಾಸ್ ಕಾಲೇಜ್ ಆಫ್ ಎಜುಕೇಷನ್, ಮೂಡಬಿದಿರೆ ಎಂಬ ವಿದ್ಯಾ ಸಂಸ್ಥೆಗೆ ಶೈಕ್ಷಣಿಕ ವರ್ಷ 2017–18ನೇ ಸಾಲಿಗೆ ಮುಂದುವರಿಕೆ ಸಂಯೋಜನಾ ಮಂಜೂರಾತಿ ಬಗ್ಗೆ.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯು ಮುಂದುವರಿಕೆ ಸಂಯೋಜನೆ ಬಗ್ಗೆ ಸಲ್ಲಿಸಿದ ವರದಿಯ ಆಧಾರದ ಮೇಲೆ ಶೈಕ್ಷಣಿಕ ಮಂಡಳಿಯು ಮಾಡಿರುವ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಸಾ.ಸ.4:8(2017)

**ವಿಷಯ:** ಆಳ್ವಾಸ್ ಕಾಲೇಜ್ ಆಫ್ ಫಿಸಿಕಲ್ ಎಜುಕೇಷನ್, ಮೂಡಬಿದಿರೆ ಎಂಬ ವಿದ್ಯಾ ಸಂಸ್ಥೆಗೆ ಶೈಕ್ಷಣಿಕ ವರ್ಷ 2017–18ನೇ ಸಾಲಿಗೆ ಮುಂದುವರಿಕೆ ಸಂಯೋಜನಾ ಮಂಜೂರಾತಿ ಬಗ್ಗೆ.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯು ಮುಂದುವರಿಕೆ ಸಂಯೋಜನೆ ಬಗ್ಗೆ ಸಲ್ಲಿಸಿದ ವರದಿಯ ಆಧಾರದ ಮೇಲೆ ಶೈಕ್ಷಣಿಕ ಮಂಡಳಿಯು ಮಾಡಿರುವ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಸಾ.ಸ.4:9(2017)

**ವಿಷಯ:** ಸಂತ ಅಲೋಶಿಯಸ್ ಇನ್ಸ್ಟಿಟ್ಯೂಟ್ ಆಫ್ ಎಜುಕೇಷನ್, ಮಂಗಳೂರು ಎಂಬ ವಿದ್ಯಾ ಸಂಸ್ಥೆಗೆ ಶೈಕ್ಷಣಿಕ ವರ್ಷ 2017–18ನೇ ಸಾಲಿಗೆ ಮುಂದುವರಿಕೆ ಸಂಯೋಜನಾ ಮಂಜೂರಾತಿ ಬಗ್ಗೆ.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯು ಮುಂದುವರಿಕೆ ಸಂಯೋಜನೆ ಬಗ್ಗೆ ಸಲ್ಲಿಸಿದ ವರದಿಯ ಆಧಾರದ ಮೇಲೆ ಶೈಕ್ಷಣಿಕ ಮಂಡಳಿಯು ಮಾಡಿರುವ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಸಾ.ಸ.4:10(2017)

**ವಿಷಯ:** ಪ್ರೇಮಕಾಂತಿ ಕಾಲೇಜ್ ಆಫ್ ಎಜುಕೇಷನ್, ಮಂಗಳೂರು ಎಂಬ ವಿದ್ಯಾ ಸಂಸ್ಥೆಗೆ ಶೈಕ್ಷಣಿಕ ವರ್ಷ 2017–18ನೇ ಸಾಲಿಗೆ ಮುಂದುವರಿಕೆ ಸಂಯೋಜನಾ ಮಂಜೂರಾತಿ ಬಗ್ಗೆ.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯು ಮುಂದುವರಿಕೆ ಸಂಯೋಜನೆ ಬಗ್ಗೆ ಸಲ್ಲಿಸಿದ ವರದಿಯ ಆಧಾರದ ಮೇಲೆ ಶೈಕ್ಷಣಿಕ ಮಂಡಳಿಯು ಮಾಡಿರುವ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಸಾ.ಸ.4:11(2017)

**ವಿಷಯ:** ಶ್ರೀನಿವಾಸ್ ಕಾಲೇಜ್ ಆಫ್ ಎಜುಕೇಶನ್, ಮಂಗಳೂರು ಎಂಬ ವಿದ್ಯಾ ಸಂಸ್ಥೆಗೆ ಶೈಕ್ಷಣಿಕ ವರ್ಷ 2017–18ನೇ ಸಾಲಿಗೆ ಮುಂದುವರಿಕೆ ಸಂಯೋಜನಾ ಮಂಜೂರಾತಿ ಬಗ್ಗೆ.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯು ಮುಂದುವರಿಕೆ ಸಂಯೋಜನೆ ಬಗ್ಗೆ ಸಲ್ಲಿಸಿದ ವರದಿಯ ಆಧಾರದ ಮೇಲೆ ಶೈಕ್ಷಣಿಕ ಮಂಡಳಿಯು ಮಾಡಿರುವ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಸಾ.ಸ.4:12(2017)

**ವಿಷಯ:** ಲೀಲಾವತಿ ಶೆಟ್ಟಿ ಕಾಲೇಜ್ ಆಫ್ ಎಜುಕೇಷನ್, ಮಂಗಳೂರು ಎಂಬ ವಿದ್ಯಾ ಸಂಸ್ಥೆಗೆ ಶೈಕ್ಷಣಿಕ ವರ್ಷ 2017–18ನೇ ಸಾಲಿಗೆ ಮುಂದುವರಿಕೆ ಸಂಯೋಜನಾ ಮಂಜೂರಾತಿ ಬಗ್ಗೆ.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯು ಮುಂದುವರಿಕೆ ಸಂಯೋಜನೆ ಬಗ್ಗೆ ಸಲ್ಲಿಸಿದ ವರದಿಯ ಆಧಾರದ ಮೇಲೆ ಶೈಕ್ಷಣಿಕ ಮಂಡಳಿಯು ಮಾಡಿರುವ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಸಾ.ಸ.4:13(2017)

**ವಿಷಯ:** ಅಮೃತ ಕಾಲೇಜ್ ಆಫ್ ಎಜುಕೇಷನ್, ಪಡೀಲ್, ಮಂಗಳೂರು ಎಂಬ ವಿದ್ಯಾ ಸಂಸ್ಥೆಗೆ ಶೈಕ್ಷಣಿಕ ವರ್ಷ 2017–18ನೇ ಸಾಲಿಗೆ ಮುಂದುವರಿಕೆ ಸಂಯೋಜನಾ ಮಂಜೂರಾತಿ ಬಗ್ಗೆ.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯು ಮುಂದುವರಿಕೆ ಸಂಯೋಜನೆ ಬಗ್ಗೆ ಸಲ್ಲಿಸಿದ ವರದಿಯ ಆಧಾರದ ಮೇಲೆ ಶೈಕ್ಷಣಿಕ ಮಂಡಳಿಯು ಮಾಡಿರುವ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಸಾ.ಸ.4:14(2017)

**ವಿಷಯ:** ಶ್ರೀ ಗೋಕರ್ಣನಾಥೇಶ್ವರ ಕಾಲೇಜ್ ಆಫ್ ಎಜುಕೇಷನ್, ಮಂಗಳೂರು ಎಂಬ ವಿದ್ಯಾ ಸಂಸ್ಥೆಗೆ ಶೈಕ್ಷಣಿಕ ವರ್ಷ 2017–18ನೇ ಸಾಲಿಗೆ ಮುಂದುವರಿಕೆ ಸಂಯೋಜನಾ ಮಂಜೂರಾತಿ ಬಗ್ಗೆ

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯು ಮುಂದುವರಿಕೆ ಸಂಯೋಜನೆ ಬಗ್ಗೆ ಸಲ್ಲಿಸಿದ ವರದಿಯ ಆಧಾರದ ಮೇಲೆ ಶೈಕ್ಷಣಿಕ ಮಂಡಳಿಯು ಮಾಡಿರುವ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಸಾ.ಸ.4:15(2017)

**ವಿಷಯ:** ಸರಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ದಾನಿಗಳು ಇಚ್ಛಿಸಿದ ಹೆಸರನ್ನು ನಾಮಕರಣ ಮಾಡುವ ಬಗ್ಗೆ.

**ನಿರ್ಣಯ:** ಸರಕಾರಿ ಪ್ರಥಮ ದರ್ಜೆ ಕಾಲೇಜು, ರಥಬೀದಿ, ಮಂಗಳೂರು ಎಂಬ ವಿದ್ಯಾಸಂಸ್ಥೆಯ ಹೆಸರನ್ನು ಡಾ.ಪಿ.ದಯಾನಂದ ಪೈ – ಪಿ.ಸತೀಶ್ ಪೈ ಸರಕಾರಿ ಪ್ರಥಮ ದರ್ಜೆ ಕಾಲೇಜು, ರಥಬೀದಿ, ಮಂಗಳೂರು ಎಂಬುದಾಗಿ ಮರು ನಾಮಕರಣ ಮಾಡುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಸಾ.ಸ.4:16(2017)

**ವಿಷಯ:** ಶೈಕ್ಷಣಿಕ ವರ್ಷ 2017–18ನೇ ಸಾಲಿಗೆ ಮಂಗಳೂರು ವಿಶ್ವವಿದ್ಯಾನಿಲಯದಿಂದ ಪದವಿ ಪಡೆಯುವ ವಿದ್ಯಾರ್ಥಿಗಳಿಗೆ ನೀಡುವ Transcript ಗಳಿಗೆ ಶುಲ್ಕ ನಿಗದಿಪಡಿಸುವ ಬಗ್ಗೆ.

**ನಿರ್ಣಯ:** ಶುಲ್ಕದ ತಖ್ತೆಯಲ್ಲಿ Verification of Degree Certificates/Marks Card (each) ನ ಶುಲ್ಕ ತಲಾ ರೂ.700/– ಮತ್ತು Transcript ಗೆ ಸಂಬಂಧಿಸಿದ ದೃಢೀಕರಣ ಪತ್ರಕ್ಕೆ ತಗಲುವ ಶುಲ್ಕ ರೂ.5,000/– ರ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಸಾ.ಸ.4:17(2017)

**ವಿಷಯ:** ಶ್ರೀನಿವಾಸ್ ಕಾಲೇಜ್ ಆಫ್ ಎಜುಕೇಷನ್ ಎಂಬ ವಿದ್ಯಾ ಸಂಸ್ಥೆಯನ್ನು 'ಶ್ರೀನಿವಾಸ್ ವಿಶ್ವವಿದ್ಯಾಲಯ'ದಲ್ಲಿ ವಿಲೀನಗೊಳಿಸುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಸಾ.ಸ.4:18(2017)

**ವಿಷಯ:** ಶೈಕ್ಷಣಿಕ ವರ್ಷ 2017–18ನೇ ಸಾಲಿನಲ್ಲಿ ಫೀಲ್ಡ್ ಮಾರ್ಷಲ್ ಕೆ. ಎಂ. ಕಾರ್ಯಪ್ಪ ಕಾಲೇಜು, ಮಡಿಕೇರಿ ಇಲ್ಲಿ ಎಂ.ಎಸ್ಸಿ. ಗಣಿತಶಾಸ್ತ್ರ ಹಾಗೂ ಪಿ.ಜಿ. ಡಿಪ್ಲೋಮಾ ಇನ್ ಯೋಗಿಕ್ ಸಾಯನ್ಸ್ ಕೋರ್ಸುಗಳನ್ನು ಪ್ರಾರಂಭಿಸುವ ಬಗ್ಗೆ.

**ನಿರ್ಣಯ:** ಶೈಕ್ಷಣಿಕ ವರ್ಷ 2017–18ನೇ ಸಾಲಿನಲ್ಲಿ ಫೀಲ್ಡ್ ಮಾರ್ಷಲ್ ಕೆ. ಎಂ. ಕಾರ್ಯಪ್ಪ ಕಾಲೇಜು, ಮಡಿಕೇರಿ ಇಲ್ಲಿ ಪಿ.ಜಿ. ಡಿಪ್ಲೋಮಾ ಇನ್ ಯೋಗಿಕ್ ಸಾಯನ್ಸ್ ಕೋರ್ಸನ್ನು ತಲಾ 20 ವಿದ್ಯಾರ್ಥಿ ಪರಿಮಿತಿಯೊಂದಿಗೆ ಪ್ರಾರಂಭಿಸುವುದಾಗಿ ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಸಾ.ಸ.4:19(2017)

**ವಿಷಯ:** 'ಆದರ್ಶ ಕಾಲೇಜು, ಕಕ್ಕ ಪದವು, ಅಂಚೆ:ಉಳಿ, ಬಂಟ್ವಾಳ 574326, ದ.ಕ.' ಎಂಬ ಕಾಲೇಜಿನ ಹೆಸರನ್ನು ಎಲ್.ಸಿ.ಆರ್. ಇಂಡಿಯನ್ ಪದವಿ ಕಾಲೇಜು, (LCR Indian Degree College), ಎಂಬುದಾಗಿ ಬದಲಾಯಿಸುವ ಬಗ್ಗೆ.

**ನಿರ್ಣಯ:** ಪೂರಕ ಮಾಹಿತಿಯ ಕೊರತೆಯಿಂದಾಗಿ ಮರುಮಂಡಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಸಾ.ಸ.4:20(2017)

**ವಿಷಯ:** ಸರಕಾರಿ ಪ್ರಥಮ ದರ್ಜೆ ಕಾಲೇಜು, ಕಾರ್‌ಸ್ಟ್ರೀಟ್, ಮಂಗಳೂರು ಎಂಬ ವಿದ್ಯಾ ಸಂಸ್ಥೆಗೆ ಶೈಕ್ಷಣಿಕ ವರ್ಷ 2017–18ನೇ ಸಾಲಿಗೆ ವಿಸ್ತರಣಾ ಸಂಯೋಜನಾ ಮಂಜೂರಾತಿ ಬಗ್ಗೆ.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯು ವಿಸ್ತರಣಾ ಸಂಯೋಜನೆ ಬಗ್ಗೆ ಸಲ್ಲಿಸಿದ ವರದಿಯ ಆಧಾರದ ಮೇಲೆ ಶೈಕ್ಷಣಿಕ ಮಂಡಳಿಯು ಮಾಡಿರುವ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಸಾ.ಸ.4:21(2017)

**ವಿಷಯ:** ಶೈಕ್ಷಣಿಕ ವರ್ಷ 2017–18ನೇ ಸಾಲಿಗೆ ಮಂಗಳೂರು ವಿಶ್ವವಿದ್ಯಾನಿಲಯವು ನಿಗದಿಪಡಿಸಿದ ಶುಲ್ಕದ ಬಗ್ಗೆ.

**ನಿರ್ಣಯ:** ಮಂಗಳೂರು ವಿಶ್ವವಿದ್ಯಾನಿಲಯದ ಸಂಯೋಜಿತ/ಘಟಕ/ಸ್ವಾಯತ್ತ ಕಾಲೇಜುಗಳಲ್ಲಿ ನಡೆಸಲ್ಪಡುವ ಪದವಿ/ಸ್ನಾತಕೋತ್ತರ ಪದವಿ/ಡಿಪ್ಲೋಮಾ/ಪಿ.ಜಿ.ಡಿಪ್ಲೋಮಾ/ಸರ್ಟಿಫಿಕೇಟ್ ಕೋರ್ಸುಗಳು ಹಾಗೂ Govt./ICCR ನಿಂದ ಪದವಿ/ಸ್ನಾತಕೋತ್ತರ ಪದವಿ ಕೋರ್ಸುಗಳನ್ನು ಅಭ್ಯಾಸಿಸಲು ಬರುವ ವಿದೇಶಿ ವಿದ್ಯಾರ್ಥಿಗಳ ಪ್ರವೇಶಾತಿ ಶುಲ್ಕ/ಸೇವಾ ಶುಲ್ಕ (ಪರೀಕ್ಷಾ ಶುಲ್ಕಗಳನ್ನು ಹೊರತುಪಡಿಸಿ) ಗಳನ್ನು ನಿಗದಿಪಡಿಸಿ ಅಧಿಸೂಚಿಸಿರುವುದನ್ನು ಘಟನೋತ್ತರವಾಗಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಆಡಳಿತ ಸಾ.ಸ.4:22(2017)

**ವಿಷಯ:** ವಿಶ್ವವಿದ್ಯಾನಿಲಯದ ಅತಿಥಿಗೃಹಗಳ ಕೊಠಡಿ ದರವನ್ನು ಪರಿಷ್ಕರಿಸುವ ಬಗ್ಗೆ.

**ನಿರ್ಣಯ:** ದಿನಾಂಕ 20.04.2017ರಂದು ಅನ್ವಯಿಸಿ ಪರಿಷ್ಕರಿಸಿರುವ ದರವನ್ನು ಈ ಕೆಳಗಿನಂತೆ ಭಾಗಶಃ [illegible] ಘಟನೋತ್ತರವಾಗಿ ಅನುಮೋದಿಸಲಾಯಿತು.

| Particulars | Existing Rates Rs./day (w.e.f. 20.04.2017) | Partially Revised Rates |
|---|---|---|
| (Kaveri Guest House) Official Air Conditioned Rooom | 400.00 | 300.00 |
| Nethravathi Guest House) Ordinary Room (Non AC) | 300.00 | 200.00 |

**ಕಾರ್ಯಸೂಚಿ ಸಂಖ್ಯೆ:** ಸಾರ್ವತ್ರಿಕ ಸಾ.ಸ.4:23(2017)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ವಿವಿಧ ಯೋಜನೆಗಳಡಿ ಶೇ. 3ರಷ್ಟು ನಿಧಿಯನ್ನು ಅಂಗವಿಕಲರ ಉಪಯೋಗಕ್ಕಾಗಿ ಮೀಸಲಿರಿಸುವ ಬಗ್ಗೆ.

**ನಿರ್ಣಯ:** ವಿಶ್ವವಿದ್ಯಾನಿಲಯದ ಅಭಿವೃದ್ಧಿ ಯೋಜನೆಗಳಿಗೆ ಬರುವ ಅನುದಾನಗಳನ್ನು ಗಣನೆಗೆ ತೆಗೆದುಕೊಂಡು ಅಂಗವಿಕಲರ ಉಪಯೋಗಕ್ಕಾಗಿ ಲಭ್ಯವಿರುವ ಮೊತ್ತವನ್ನು ನಿರ್ಧರಿಸಲು ಹಣಕಾಸು ಅಧಿಕಾರಿಯವರಿಗೆ ಸೂಚಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾ.ಸ.4:24(2017)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಹೈದ್ರಾಬಾದ್-ಕರ್ನಾಟಕ ಸ್ಥಳೀಯ ವೃಂದದಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಅದ್ಯತೆ ನೆಲೆಯಲ್ಲಿ ಅವಶ್ಯಕತೆ ಇರುವ ವಿಷಯಗಳಿಗೆ ಹುದ್ದೆಗಳನ್ನು redeployment ಮೂಲಕ ವರ್ಗಾಯಿಸಲು ಅನುಮೋದನೆ ನೀಡುವ ಬಗ್ಗೆ.

**ನಿರ್ಣಯ:** Redeployment ಮೂಲಕ ಖಾಲಿಯಿರುವ ಬೋಧಕ ಹುದ್ದೆಗಳನ್ನು ಆದ್ಯತೆ ನೆಲೆಯಲ್ಲಿ ಅವಶ್ಯಕತೆ ಇರುವ ವಿಷಯಗಳಿಗೆ ವರ್ಗಾಯಿಸುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾ.ಸ.4:25(2017)

**ವಿಷಯ:** ಡಾ. ನವೀನ್ ಕುಮಾರ್ ಎಸ್. ಕೆ. ಪ್ರಾಧ್ಯಾಪಕರು, ಹಾಗೂ ಅಧ್ಯಕ್ಷರು ಇಲೆಕ್ಟ್ರಾನಿಕ್ಸ್ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ, ಇವರಿಗೆ ದಿನಾಂಕ 25.05.2017 ರಿಂದ 25.06.2017 ರ ವರೆಗೆ Florida International University, Miami, USA ಇಲ್ಲಿನ Indo-US 21st Century Knowledge Intitative Project funded by UGC, ಸಂಶೋಧನ ಚಟುವಟಿಕೆಗಳ ಬಗ್ಗೆ ಚರ್ಚಿಸುವ ಸಲುವಾಗಿ ಭಾಗವಹಿಸಲು ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾ.ಸ.4:26(2017)

**ವಿಷಯ:** ಡಾ. ಎಂ. ಜಯಶಂಕರ್, ಪ್ರಾಧ್ಯಾಪಕರು, ಸೂಕ್ಷ್ಮಾಣು ಜೀವವಿಜ್ಞಾನ ವಿಭಾಗ, ಸ್ನಾತಕೋತ್ತರ ಕೇಂದ್ರ, ಚಿಕ್ಕ ಅಳುವಾರ ಇವರ ಮೇಲಿನ ದೂರುಗಳ ಬಗ್ಗೆ ನಡೆಸಿದ ಇಲಾಖಾ ವಿಚಾರಣೆಯ ವರದಿ ಕುರಿತು.

**ನಿರ್ಣಯ:** ಸದರಿ ಸಿಬ್ಬಂದಿಗೆ ಇಲಾಖಾ ವಿಚಾರಣೆಯ ವರದಿಯ ಕುರಿತು ಕಾರಣ ಕೇಳಿ ನೋಟೀಸು ಜಾರಿಗೊಳಿಸಲು ಸೂಚಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಪರೀಕ್ಷಾಂಗ ಸಾ.ಸ.4:27(2017)

**ವಿಷಯ:** ಪಿಹೆಚ್.ಡಿ. ಪದವಿ ಪ್ರದಾನ ಬಗ್ಗೆ.

**ನಿರ್ಣಯ:** ಪಿಹೆಚ್.ಡಿ. ಪದವಿ ಪ್ರದಾನ ಮಾಡುವ ಪಟ್ಟಿಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಪರೀಕ್ಷಾಂಗ ಸಾ.ಸ.4:28(2017)

**ವಿಷಯ:** ವಿವಿಧ ರಾಜ್ಯಗಳ Bar Council ನಿಂದ ನೈಜತೆ ಪರಿಶೀಲನೆಗಾಗಿ ಬಂದಿರುವ LLB ಪದವಿ ದಾಖಲೆಗಳನ್ನು ಶುಲ್ಕ ರಹಿತವಾಗಿ ಪರಿಶೀಲಿಸಿ ನೀಡಿದ ಬಗ್ಗೆ.

**ನಿರ್ಣಯ:** ದಾಖಲೆಗಳನ್ನು ಶುಲ್ಕ ರಹಿತವಾಗಿ ಪರಿಶೀಲಿಸಿ ನೀಡಿರುವುದನ್ನು ಅನುಮೋದಿಸಲಾಯಿತು. Bar Council of India ಇವರಿಗೆ ಪತ್ರ ಬರೆದು ದಾಖಲೆ ಪರಿಶೀಲನೆಗೆ ಶುಲ್ಕ ವಿಧಿಸುವುದು ವಿಶ್ವವಿದ್ಯಾನಿಲಯಕ್ಕೆ ಹಣಕಾಸಿನ ಒಂದು ಮೂಲವಾಗಿದ್ದು ಅದನ್ನು ವಿಧಿಸಲು ಅನುಮತಿ ಕೋರಿ ಮನವಿ ಸಲ್ಲಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ ಸಾ.ಸ.4:29(2017)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ "ಕೊಂಕಣಿ ಅಧ್ಯಯನ ಪೀಠ" ಸ್ಥಾಪನೆ ಬಗ್ಗೆ ರಚಿಸಿದ ತಿದ್ದುಪಡಿ ಕರಡು ಪರಿನಿಯಮವನ್ನು ಅನುಮೋದಿಸುವ ಬಗ್ಗೆ.

**ನಿರ್ಣಯ:** ತಿದ್ದುಪಡಿ ಮಾಡಲಾದ ಕರಡು ಪರಿನಿಯಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ ಸಾ.ಸ.4:30(2017)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಶ್ರೀ ಮುಕುಂದ ರಾವ್ ಮೆಮೋರಿಯಲ್ ಎಂಡೋ ಮೆಂಟ್ ಅನುಶಾಸನ ತಿದ್ದುಪಡಿ ಬಗ್ಗೆ.

**ನಿರ್ಣಯ:** "Shri S Mukunda Rao and Smt Sharada Rao Memorial Endowment" ಎಂಬುದಾಗಿ ಮರುನಾಮಕರಣ ಹಾಗೂ ವಿದ್ಯಾರ್ಥಿ ವೇತನದ ಹಂಚಿಕೆಗೆ ಸಂಬಂಧಪಟ್ಟಂತೆ ಅಧಿಸೂಚನೆಯಲ್ಲಿ ತಿದ್ದುಪಡಿಗಳನ್ನು ಮಾಡುವುದಾಗಿ ನಿರ್ಣಯಿಸಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ ಸಾ.ಸ.4:31(2017)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿರುವ ವಿಶ್ವಮಂಗಳ ವಿದ್ಯಾಸಂಸ್ಥೆಯ ಸಭಾಭವನ ಕಟ್ಟಡದಲ್ಲಿ ತರಗತಿ ಕೊಠಡಿ ನಿರ್ಮಾಣಕ್ಕೆ ಧನ ಸಹಾಯ ನೀಡುವ ಬಗ್ಗೆ.

**ನಿರ್ಣಯ:** ವಿಶ್ವಮಂಗಳ ವಿದ್ಯಾಸಂಸ್ಥೆಯ ಸ್ಥಾಪನೆ, ಸಂಸ್ಥೆಯ ಆಡಳಿತದಲ್ಲಿ ಮಂಗಳೂರು ವಿಶ್ವವಿದ್ಯಾನಿಲಯಕ್ಕೆ ಇರುವ ಅಧಿಕಾರ, ಜವಾಬ್ದಾರಿ, ಇದುವರೆಗೆ ನೀಡಿದ ಅನುದಾನ, ಕಾಲೇಜಿನ ಹಣಕಾಸು ಪರಿಸ್ಥಿತಿ, ಸರ್ಕಾರದಿಂದ ನೆರವು ಪಡೆಯುವ ಸಾಧ್ಯತೆ, ಇತ್ಯಾದಿಗಳ ಕುರಿತು ಮಾಹಿತಿ ಸಂಗ್ರಹಿಸಿ ಪ್ರಸ್ತಾವನೆಯನ್ನು ಮರು ಮಂಡಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ ಸಾ.ಸ.4:32(2017)

**ವಿಷಯ:** 2017–18ನೇ ಸಾಲಿಗೆ ಮಂಗಳೂರು ವಿಶ್ವವಿದ್ಯಾನಿಲಯದ ವಿವಿಧ ಸ್ನಾತಕೋತ್ತರ ವಿಭಾಗಗಳಿಗೆ/ಘಟಕ ಕಾಲೇಜುಗಳಿಗೆ ರಾಸಾಯನಿಕಗಳು/ಗ್ಲಾಸ್‌ವೇರ್/ಬಳಕೆಯ ವಸ್ತುಗಳನ್ನು ಪೂರೈಕೆಗೆ ಧಾರಣಾಗುತ್ತಿಗೆ ಆಧಾರದಲ್ಲಿ ಸರಬರಾಜು ಮಾಡಲು ಸಂಸ್ಥೆಗಳ ಪಟ್ಟಿಗೆ ಅನುಮೋದನೆ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ ಸಾ.ಸ.4:33(2017)

**ವಿಷಯ:** CARER ಕೇಂದ್ರದಲ್ಲಿ ಅಳವಡಿಸಿದ ವಿವಿಧ ಉಪಕರಣಗಳ ಬಳಕೆಗೆ ಶುಲ್ಕ ನಿಗದಿ ಹಾಗೂ ಮಾರ್ಗಸೂಚಿ ತಯಾರಿಸಲು ರಚಿಸಿದ ಸಮಿತಿ ಸಭೆಯ ನಡಾವಳಿಯ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ ಸಾ.ಸ.4:34(2017)

**ವಿಷಯ:** ಡಾ. ರಾಜಶೇಖರ್ ಕೆ. ಪಾಟೀಲ್, ಪ್ರಾಧ್ಯಾಪಕರು, ಅನ್ವಯಿಕ ಪ್ರಾಣಿಶಾಸ್ತ್ರ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ, ಇವರಿಗೆ ದಿನಾಂಕ 14.06.2017ರಿಂದ 18.06.2017ರವರೆಗೆ 'Canada' ಇಲ್ಲಿ ನಡೆಯಲಿರುವ ಅಂತರಾಷ್ಟ್ರೀಯ ಸಮ್ಮೇಳನದಲ್ಲಿ ಭಾಗವಹಿಸಿ ಪತ್ರಿಕೆ ಮಂಡಿಸಲು ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಸದರಿಯವರಿಗೆ ದಿನಾಂಕ 13.06.2017 ರಿಂದ 17.06.2017ರ ವರೆಗೆ Niagara Ontario Canada, ಇಲ್ಲಿ ನಡೆಯುವ ಅಂತರಾಷ್ಟ್ರೀಯ ಸಮ್ಮೇಳನದಲ್ಲಿ ವಿಶ್ವವಿದ್ಯಾನಿಲಯಕ್ಕೆ ಯಾವುದೇ ಆರ್ಥಿಕ ಹೊರೆ ಇಲ್ಲದಂತೆ ಭಾಗವಹಿಸಿ ಪತ್ರಿಕೆ ಮಂಡಿಸಲು ಅನುಮತಿ ನೀಡುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ ಸಾ.ಸ.4:35(2017)

**ವಿಷಯ:** ಪ್ರಸಾರಾಂಗದ ರಜತಗ್ರಂಥ ಸರಣಿಯಲ್ಲಿ ಸಂಪಾದಿತ ಕೃತಿಗಳ ಸಂಪಾದಕರಿಗೆ ಕೃತಿಯೊಂದಕ್ಕೆ ರೂ. 5,000/- ಗೌರವ ಸಂಭಾವನೆಯನ್ನು ಪಾವತಿಸಲು ಮಂಜೂರಾತಿ ನೀಡುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟ್ ಸಾ.ಸ.4:36(2017)

**ವಿಷಯ:** ಪದವಿ ಮತ್ತು ಸ್ನಾತಕೋತ್ತರ ಫುಡ್ ಸೈನ್ಸ್ ಆ್ಯಂಡ್ ಟೆಕ್ನಾಲಜಿ (Food Science and Te hnology) ಸಂಯುಕ್ತ ಅಧ್ಯಯನ ಮಂಡಳಿ ರಚನೆ ಬಗ್ಗೆ.

**ನಿರ್ಣಯ:** ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡ ಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟ್ ಸಾ.ಸ.4:37(2017)

**ವಿಷಯ:** ಪದವಿ ಮಟ್ಟದ ಆಧುನಿಕ ಯುರೋಪಿಯನ್ ಲ್ಯಾಂಗ್ವೇಜ್ (Modern European L nguages) ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಬಗ್ಗೆ.

**ನಿರ್ಣಯ:** ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡ ಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟ್ ಸಾ.ಸ.4:38(2017)

**ವಿಷಯ:** ಸ್ನಾತಕೋತ್ತರ ವ್ಯವಹಾರ ಆಡಳಿತ, ಟೂರಿಸಂ ಮತ್ತು ಹಾಸ್ಪಿಟಾಲಿಟಿ ಮ್ಯಾನೇಜ್‌ಮೆಂಟ್ ಸಂಯುಕ್ತ ಅಧ್ಯಯನ ಮಂಡಳಿ" ಮತ್ತು "ಟೂರಿಸಂ ಆ್ಯಂಡ್ ಟ್ರಾವೆಲ್ ಮ್ಯಾನೇಜ್‌ಮೆಂಟ , ಮತ್ತು ಸ್ನಾತಕೋತ್ತರ ಡಿಪ್ಲೊಮಾ ಇನ್ ಟೂರಿಸಂ ಆ್ಯಂಡ್ ಹೋಟೇಲ್ ಮ್ಯಾನೇಜ್‌ಮೆಂಟ್, ಸಂಯುಕ್ತ ಅಧ್ಯಯನ ಮಂಡಳಿ"ಗಳನ್ನು ಮರುನಾಮಕರಣ ಮಾಡುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟ್ ಸಾ.ಸ.4:39(2017)

**ವಿಷಯ:** ಸ್ನಾತಕೋತ್ತರ ರಸಾಯನಶಾಸ್ತ್ರ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ.

**ನಿರ್ಣಯ:** ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡ ಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟ್ ಸಾ.ಸ.4:40(2017)

**ವಿಷಯ:** ಶ್ರೀ ಪ್ರಸನ್ನ ಕುಮಾರ್ ರೈ, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆಗಳು

**ನಿರ್ಣಯ:** ಬಸವ ತತ್ವ ಅಧ್ಯಯನ ಪೀಠವನ್ನು ಪ್ರಾರಂಭಿಸುವ ಬಗ್ಗೆ ಅನುಮತಿ ಕೋರಿ ಸರ್ಕಾರಕ್ಕೆ ಪತ್ರವೊಂದನ್ನು ಬರೆಯಲು ನಿರ್ಧರಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಪರೀಕ್ಷಾಂಗ ಸಾ.ಸ.4:41(2017)

**ವಿಷಯ:** ಪಿಹೆಚ್.ಡಿ. ಕೋರ್ಸ್ ವರ್ಕ್ 2016-17 - ಪರೀಕ್ಷಕರ ಪಟ್ಟಿ ಮಂಜೂರಾತಿ ಬಗ್ಗೆ.

**ನಿರ್ಣಯ:** ಪರೀಕ್ಷಕರ ಪಟ್ಟಿಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಪರೀಕ್ಷಾಂಗ ಸಾ.ಸ.4:42(2017)

**ವಿಷಯ:** ಎಪ್ರಿಲ್/ಮೇ 2017ರಲ್ಲಿ ಜರುಗಿದ ವಿಶ್ವವಿದ್ಯಾನಿಲಯದ ವಿವಿಧ ಪದವಿ / ಸ ತಕೋತ್ತರ ಪರೀಕ್ಷೆಗಳಲ್ಲಿ ಪರೀಕ್ಷಾ ಅವ್ಯವಹಾರ ನಡೆಸಿದ ವಿದ್ಯಾರ್ಥಿಗಳ ಬಗ್ಗೆ ತನಿಖಾ ವರದಿ.

**ನಿರ್ಣಯ:** ಪರೀಕ್ಷಾ ಅವ್ಯವಹಾರ ತನಿಖಾ ಸಮಿತಿಯು ಸಲ್ಲಿಸಿರುವ ವರದಿಯನ್ನು ಅನುಮೋದಿಸಲಾ ತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಸಾ.ಸ.4:43(2017)

**ವಿಷಯ:** ಸಾಯಿ ಶಂಕರ್ ಶಿಕ್ಷಣ ಮಹಾವಿದ್ಯಾಲಯ, ಪೊನ್ನಂಪೇಟೆ, ಕೊಡಗು ಎಂಬ ವಿದ್ಯಾ ಸಂಸ್ಥೆಗೆ ಶೈಕ್ಷಣಿಕ ವರ್ಷ 2017-18ನೇ ಸಾಲಿಗೆ ಮುಂದುವರಿಕೆ ಸಂಯೋಜನಾ ಮಂಜೂರಾತಿ ಬಗ್ಗೆ.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯು ಮುಂದುವರಿಕೆ ಸಂಯೋಜನೆ ಬಗ್ಗೆ ಸಲ್ಲಿಸಿದ ವರದಿಯ ಆಧಾರದ ಮೇಲೆ ಶೈಕ್ಷಣಿಕ ಮಂಡಳಿಯು ಮಾಡಿರುವ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಆಡಳಿತ ಸಾ.ಸ.4:44(2017)

**ವಿಷಯ:** 2016-17ನೇ ಸಾಲಿಗೆ ಗಣಕಯಂತ್ರಗಳ ವಾರ್ಷಿಕ ನಿರ್ವಹಣೆಗೆ ನೀಡಿದ ಗುತ್ತಿಗೆ ಅವಧಿಯನ್ನು ಮುಂದಿನ ಆದೇಶದವರೆಗೆ ವಿಸ್ತರಿಸಿದ ಬಗ್ಗೆ.

**ನಿರ್ಣಯ:** ಗಣಕಯಂತ್ರಗಳ ವಾರ್ಷಿಕ ನಿರ್ವಹಣೆ ಗುತ್ತಿಗೆಯನ್ನು ಮೆ.ಬೇಸ್ ಕಂಪ್ಯೂಟರ್ಸ್, ಮಂಗಳೂರು ಇವರಿಗೆ ದಿನಾಂಕ 01.04.2017ರಿಂದ ಅನ್ವಯಿಸಿ ಮುಂದಿನ ಹೊಸ ಗುತ್ತಿಗೆದಾರರನು ಆಯ್ಕೆ ಮಾಡುವವರೆಗೆ ಅದೇ ದರ ಮತ್ತು ಷರತ್ತಿನ ಮೇಲೆ ವಿಸ್ತರಿಸಲಾದ ಪ್ರಸ್ತಾವನೆಯನ್ನು ಘಟನೋತ್ತರವಾಗಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಸಾ.ಸ.4:45(2017)

**ವಿಷಯ:** ಸರಕಾರಿ ಪ್ರಥಮ ದರ್ಜೆ ಕಾಲೇಜು, ವಾಮದಪದವು ಎಂಬ ವಿದ್ಯಾಸಂಸ್ಥೆಗೆ ಶೈಕ್ಷಣಿಕ ವರ್ಷ 2017-18ನೇ ಸಾಲಿಗೆ ವಿಸ್ತರಣಾ ಸಂಯೋಜನಾ ಮಂಜೂರಾತಿ ಬಗ್ಗೆ.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯು ವಿಸ್ತರಣಾ ಸಂಯೋಜನೆ ಬಗ್ಗೆ ಸಲ್ಲಿಸಿದ ವರದಿಯ ಆಧಾರದ ಮೇಲೆ ಶೈಕ್ಷಣಿಕ ಮಂಡಳಿಯು ಮಾಡಿರುವ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ ಸಾ.ಸ.4:46(2017)

**ವಿಷಯ:** Construction of new Ladies Hostel Block at FMKMC; Supplying wooden cots to the new ladies hostel block.

**ನಿರ್ಣಯ:** ದಿನಾಂಕ 26.07.2016ರ ಖರೀದಿ ಸಮಿತಿ ಸಭೆಯ ಶಿಫಾರಸ್ಸಿನಂತೆ M/s. Prashnath Wood & Steel Furnitures, Madikeri ಇಲ್ಲಿಂದ 34 ಸಂಖ್ಯೆಯ ಮರದ ಮಂಚಗಳನ್ನು ರೂ.2 .3,180/- ವೆಚ್ಚದಲ್ಲಿ ಖರೀದಿಸುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಪ.ಜಾ.ಪ.ಪಂ.ಘಟಕ ಸಾ.ಸ.4:47(2017)

**ವಿಷಯ:** ದಿನಾಂಕ 01.07.2017 ರಂದು ಜರಗಿದ ಪರಿಶಿಷ್ಟ ಜಾತಿ/ಪಂಗಡದ ಸ್ಥಾಯಿ ಸಮಿತಿ ಸಭೆಯ ನಡವಳಿ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಪ.ಜಾ.ಪ.ಪಂ.ಘಟಕ ಸಾ.ಸ.4:48(2017)

**ವಿಷಯ:** ಆರ್ಥಿಕ ವರ್ಷ 2012-13 ರಿಂದ 2016-17ನೇ ಸಾಲಿನವರೆಗೆ ಸರಕಾರದಿಂದ ಬಿಡುಗಡೆಯಾದ SCP-TCP ಅನುದಾನವನ್ನು ಬಳಕೆ ಮಾಡಿಕೊಂಡು ಬಾಕಿ ಉಳಿಕೆಯಾಗಿರುವ ಮೊತ್ತವನ್ನು ಬಳಕೆ ಮಾಡುವ ಕುರಿತು.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾ.ಸ.4:49(2017)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಗ್ರಂಥಾಲಯದಲ್ಲಿ ರಾಜ್ಯ ವೇತನ ಶ್ರೇಣಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಹಾಯಕ ಗ್ರಂಥಪಾಲಕರಿಗೆ ಯುಜಿಸಿ ವೇತನ ಶ್ರೇಣಿಯನ್ನು ವಿಸ್ತರಿಸುವ ಬಗ್ಗೆ.

**ನಿರ್ಣಯ:** ಡಾ. ಪುಷ್ಪಲತಾ ಇವರಿಗೆ ಯುಜಿಸಿ ವೇತನ ಶ್ರೇಣಿಯನ್ನು ವಿಸ್ತರಿಸಿರುವ ಬಗ್ಗೆ ಯುಜಿಸಿಯಿಂದ ಬಂದ ಪತ್ರದ ಕುರಿತು ಸರಕಾರದ ಸ್ಪಷ್ಟನೆ ಈಗಾಗಲೇ ಕೋರಿದ್ದು, ಸರಕಾರ ನೀಡುವ ನಿರ್ದೇಶನಕ್ಕನುಗುಣವಾಗಿ ಮುಂದಿನ ಕ್ರಮಕೈಗೊಳ್ಳುವುದೆಂದು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾ.ಸ.4:50(2017)

**ವಿಷಯ:** ಡಾ. ಸಿ. ಕೆ. ಹೆಬ್ಬಾರ್, ಸಹ ಪ್ರಾಧ್ಯಾಪಕರು, ವಾಣಿಜ್ಯ ಶಾಸ್ತ್ರ ವಿಭಾಗ, ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇವರಿಗೆ ದಿನಾಂಕ 03.07.2017 ಮತ್ತು 04.07.2017 ರಂದು University of Oxford, SAID, Business School, UK ಇಲ್ಲಿ ನಡೆಯಲಿರುವ ಅಂತರರಾಷ್ಟ್ರೀಯ ಸಮ್ಮೇಳನದಲ್ಲಿ ಪತ್ರಿಕೆ ಮಂಡಿಸಲು ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾ.ಸ.4:51(2017)

**ವಿಷಯ:** ವಿಶ್ವವಿದ್ಯಾನಿಲಯ ಆವರಣ, ಮಂಗಳಗಂಗೋತ್ರಿ ಇಲ್ಲಿ ವಿಶ್ವವಿದ್ಯಾನಿಲಯ ಪ್ರಥಮ ದರ್ಜೆ ಕಾಲೇಜು ಸ್ಥಾಪನೆ ಹಾಗೂ ಹುದ್ದೆಗಳ ಸೃಜನೆಯ ಅನುಶಾಸನದ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾ.ಸ.4:52(2017)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಮಾನವ ಪ್ರಜ್ಞೆ ಮತ್ತು ಯೋಗ ವಿಜ್ಞಾನ ವಿಭಾಗಕ್ಕೆ ಹೆಚ್ಚುವರಿ ಬೋಧಕ / ಬೋಧಕೇತರ ಹುದ್ದೆಗಳ ಸೃಜನೆ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾ.ಸ.4:53(2017)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಸ್ನಾತಕೋತ್ತರ ಮೆಡಿಕಲ್ ಫಿಸಿಕ್ಸ್ ವಿಭಾಗ ಸ್ಥಾಪಿಸುವ ಹಾಗೂ ಹುದ್ದೆಗಳ ಸೃಜನೆಯ ಕರಡು ಅನುಶಾಸನದ ಅನುಮೋದನೆ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾ.ಸ.4:54(2017)

**ವಿಷಯ:** ಡಾ. ಬಿ. ಹೆಚ್. ಶೇಖರ್, ಪ್ರಾಧ್ಯಾಪಕರು, ಗಣಕ ವಿಜ್ಞಾನ ವಿಭಾಗ, ಹಾಗೂ ವಿಶೇಷಾಧಿಕಾರಿ, ಕುಲಸಚಿವರ ಕಛೇರಿ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ, ಇವರಿಗೆ ದಿನಾಂಕ 31.07.2017 ರಿಂದ 12.08.2017ರ ವರೆಗೆ Moscow State University, Moscow, Russia, ಇಲ್ಲಿ ಸಂಶೋಧನೆ ಕಾರ್ಯ ನಡೆಸುವ ಸಲುವಾಗಿ ಭೇಟಿ ನೀಡುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ ಸಾ.ಸ.4:55(2017)

**ವಿಷಯ:** ಗಣಕಯಂತ್ರ ಕೇಂದ್ರದ firewall ನ ವಾರ್ಷಿಕ ನಿರ್ವಹಣೆ ಬಗ್ಗೆ.

**ನಿರ್ಣಯ:** ದಿನಾಂಕ 05.07.2017ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸಿನಂತೆ M/ Techser Power Solutions Pvt.Ltd., ಮಂಗಳೂರು ಇವರಿಂದ firewallನ ವಾರ್ಷಿಕ ನಿರ್ವಹಣೆ ರೂ.4,88,980.00 ವೆಚ್ಚದಲ್ಲಿ ಖರೀದಿಸುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ ಸಾ.ಸ.4:56(2017)

**ವಿಷಯ:** 2017-18ನೇ ಸಾಲಿನ ಪ್ರಥಮ ವರ್ಷದ ಪದವಿ ತರಗತಿಗಳ ಪರಿಷ್ಕೃತ ಕನ್ನಡ ಪಠ್ಯ ಪುಸ್ತಕಗಳನ್ನು ಮುದ್ರಿಸುವ ಬಗ್ಗೆ.

**ನಿರ್ಣಯ:** ದಿನಾಂಕ 05.07.2017ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸಿನಂತೆ ಕನಿಷ್ಠ ದರ ನಮೂದಿಸಿದ ಮೆ.ಪೂರ್ಣಿಮಾ ಪ್ರಿಂಟರ್ಸ್, ಬೆಂಗಳೂರು ಇವರಿಂದ 10 ಸಂಖ್ಯೆಯ ಪುಸ್ತಕಗಳನ್ನು ಮತ್ತು ಪ್ರವೀಣ್ ಲಾರೆನ್ಸ್ ಪತ್ರಾವೋ, ಮಂಗಳೂರು ಇವರಿಂದ 2 ಸಂಖ್ಯೆಯ ಪುಸ್ತಕಗಳನ್ನು ಮುದ್ರಿಸುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ ಸಾ.ಸ.4:57(2017)

**ವಿಷಯ:** DAE-BRNS ಪ್ರಾಜೆಕ್ಟ್, ರಸಾಯನಶಾಸ್ತ್ರ ವಿಭಾಗ – ಉಪಕರಣ ಖರೀದಿ ಪ್ರಸ್ತಾವನೆ ಬಗ್ಗೆ.

**ನಿರ್ಣಯ:** ದಿನಾಂಕ 05.07.2017ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸಿನಂತೆ M/ Catalyst Systems, Pune ಇಲ್ಲಿಂದ Microwave Synthesizer ಉಪಕರಣವನ್ನು ರೂ.[illegible]60,000.00 ವೆಚ್ಚದಲ್ಲಿ ಖರೀದಿಸುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ ಸಾ.ಸ.4:58(2017)

**ವಿಷಯ:** Medical Physics ಕೋರ್ಸು, ಮಂಗಳೂರು ವಿಶ್ವವಿದ್ಯಾನಿಲಯ ಪ್ರಯೋಗಾಲಯ ಉಪಕರಣಗಳ ಖರೀದಿಯ ಮಂಜೂರಾತಿ ಬಗ್ಗೆ.

**ನಿರ್ಣಯ:** ದಿನಾಂಕ 05.07.2017ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸಿನಂತೆ M/s Nucleonix System Pvt.Ltd., Hyderabad ಇವರಿಂದ ಉಪಕರಣಗಳನ್ನು ರೂ.20,13,411.00 ವೆಚ್ಚದಲ್ಲಿ ಖರೀದಿಸುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಾರ್ವತ್ರಿಕ ಸಾ.ಸ.4:59(2017)

**ವಿಷಯ:** ಫೀಲ್ಡ್ ಮಾರ್ಷಲ್ ಕೆ. ಎಂ. ಕಾರ್ಯಪ್ಪ ಕಾಲೇಜು, ಮಡಿಕೇರಿ ಇಲ್ಲಿನ ವಾರ್ಷಿಕ ಸಂಚಿಕೆ 'ಭೂರಮೆ' ಮುದ್ರಣದ ಬಗ್ಗೆ.

**ನಿರ್ಣಯ:** ದಿನಾಂಕ 05.07.2017ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸಿನಂತೆ ಮೆ.ಶ[illegible] ಪ್ರಿಂಟರ್ಸ್, ಮಡಿಕೇರಿ ಇವರಿಂದ ರೂ.1,63,947.00 ವೆಚ್ಚದಲ್ಲಿ ಮುದ್ರಿಸುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಆಡಳಿತ ಸಾ.ಸ.4:60(2017)

**ವಿಷಯ:** 2017-18ನೇ ಸಾಲಿಗೆ ಗಣಕಯಂತ್ರಗಳ ವಾರ್ಷಿಕ ನಿರ್ವಹಣೆ ಗುತ್ತಿಗೆ ಬಗ್ಗೆ.

**ನಿರ್ಣಯ:** ದಿನಾಂಕ 05.07.2017ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸಿನಂತೆ M/s Base Computers, Mangalore ಇವರಿಂದ ರೂ.8,65,650.00 ವೆಚ್ಚದಲ್ಲಿ ನಿರ್ವಹಿಸುವ ಹಾಗೂ ವಾರ್ಷಿಕ ನಿರ್ವಹಣೆ ಅವಧಿಯಲ್ಲಿ ನಿರ್ವಹಣೆಗೆ ಒಳಪಡದ ಬಿಡಿ ಭಾಗಗಳಿಗೆ ಸದರಿ ಸಂಸ್ಥೆಯು ನೀಡಿದ ಕನಿಷ್ಠ ದರಪಟ್ಟಿಯ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಸಾ.ಸ.4:61(2017)

**ವಿಷಯ:** ಶೈಕ್ಷಣಿಕ ವರ್ಷ 2017-18ನೇ ಸಾಲಿನ M.Com evening courseನ ಪಾವತಿ ವರ್ಗದಡಿ ಪ್ರವೇಶಾತಿ ಶುಲ್ಕವನ್ನು ಕಡಿಮೆ ಮಾಡುವ ಬಗ್ಗೆ.

**ನಿರ್ಣಯ:** ವಿಶ್ವವಿದ್ಯಾನಿಲಯದ ಸಂಧ್ಯಾ ಕಾಲೇಜಿನ ಎಂ.ಕಾಂ. ಕೋರ್ಸಿನ ಪಾವತಿ ವರ್ಗದಡಿಯ ಪ್ರವೇಶಾತಿ ಶುಲ್ಕವನ್ನು ರೂ.40,000/- ಕ್ಕೆ ನಿಗದಿಪಡಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ ಸಾ.ಸ.4:62(2017)

**ವಿಷಯ:** 2017–18 ನೇ ಸಾಲಿನ ಬಿಎಡ್ (ODL) ಕಾರ್ಯಕ್ರಮದ ಶುಲ್ಕ ವಿನ್ಯಾಸಕ್ಕೆ ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಆಡಳಿತ ಸಾ.ಸ.4:63(2017)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಕೇಂದ್ರ, ಚಿಕ್ಕ ಅಳುವಾರ ಇಲ್ಲಿಗೆ ಸಿ.ಸಿ. ಕ್ಯಾಮರಾ ಅಳವಡಿಸಲು ಖರೀದಿ ಪ್ರಸ್ತಾವನೆ – ದರಪಟ್ಟಿ ಅನುಮೋದನೆ ಬಗ್ಗೆ.

**ನಿರ್ಣಯ:** ದಿನಾಂಕ 05.07.2017ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಆಡಳಿತ ಸಾ.ಸ.4:64(2017)

**ವಿಷಯ:** ದೂರ ಶಿಕ್ಷಣ ಕೇಂದ್ರದ ವಿವಿಧ ಕೋರ್ಸುಗಳ ಅಧ್ಯಯನ ಸಾಮಾಗ್ರಿಗಳ ಬೈಂಡಿಂಗ್ ದರವನ್ನು ಅನುಮೋದಿಸುವ ಬಗ್ಗೆ.

**ನಿರ್ಣಯ:** ದಿನಾಂಕ 05.07.2017ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಮಾನ್ಯ ಕುಲಪತಿಯವರು ಸದಸ್ಯರುಗಳಿಗೆ ಧನ್ಯವಾದಗಳನ್ನರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

ಸಹಿ/–
ಕುಲಸಚಿವರು

ಸಹಿ/–
ಕುಲಪತಿಗಳು